**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪುಟ್ಟಣ್ಣ ರವರು ನಿಯಮ 72 ರಡಿ ನೀಡಿರುವ ಸೂಚನಾ ಪತ್ರಕ್ಕೆ ಸರ್ಕಾರದ ಉತ್ತರ**

*ವಿಷಯ:-* "ರಾಜ್ಯದ ಅನುದಾನಿತ ಶಾಲೆಗಳಲ್ಲಿ ನಿವೃತ್ತಿ ಮರಣ ರಾಜಿನಾಮೆ ಇತ್ಯಾದಿ ಕಾರಣಗಳಿಂದ ಖಾಲಿ ಆಗಿರುವ ಹುದ್ದೆಗಳನ್ನು ತುಂಬಲು 2015 ರವರೆಗೆ ಮಾತ್ರ ಅನುಮತಿ ನೀಡಲಾಗಿದೆ. ಆದರೆ, ತದ ನಂತರ ನೂರಾರು ಹುದ್ದೆಗಳು ಖಾಲಿಯಾಗಿದ್ದು, ಸದರಿ ಹುದ್ದೆಗಳನ್ನು ತುಂಬಲು ಅನುಮತಿ ನೀಡದಿರುವುದರಿಂದ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿನ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತುಂಬಾ ತೊಂದರೆಯಾಗುತ್ತಿದೆ. ಹೊಸದಾಗಿ ಅನುದಾನಕ್ಕೊಳಪಡಿಸುವ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೊಪಡಿಸದಂತೆ ಆರ್ಥಿಕ ಮಿತವ್ಯಯ ಆದೇಶ ಹೊರಡಿಸಲಾಗಿದೆ. ಆದ್ದರಿಂದ ಆರ್ಥಿಕ ಇಲಾಖೆಯು ಹೊರಡಿಸಿರುವ ಆರ್ಥಿಕ ಮಿತವ್ಯಯ ಆದೇಶವನ್ನು ಹಿಂಪಡೆಯಬೇಕೆಂಬ ವಿಷಯದ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯ ಬಯಸುತ್ತೇನೆ.

*ಉತ್ತರ:-* ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ರಾಜ್ಯದಲ್ಲಿ ತೀವ್ರ ಆರ್ಥಿಕ ಸಂಕಷ್ಟ ಸೃಷ್ಟಿಯಾಗಿರುವ ಹಿನ್ನೆಲೆಯಲ್ಲಿ ಸುತ್ತೋಲೆ ಸಂಖ್ಯೆ:ಆಇ 157 ವೆಚ್ಚ-8 2020, ದಿನಾಂಕ:10.06.2020 ರನ್ವಯ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ನಿವೃತ್ತಿ, ನಿಧನ ರಾಜೀನಾಮೆ ಇತರೆ ಯಾವುದೇ ಕಾರಣಗಳಿಂದ ಖಾಲಿಯಾಗುವ ಹುದ್ದೆಗಳನ್ನು 2020-21ನೇ ಸಾಲಿನಲ್ಲಿ ಭರ್ತಿ ಮಾಡುವುದನ್ನು ತಡೆಹಿಡಿಯಲಾಗಿದೆ ಹಾಗೂ ಸುತ್ತೋಲೆ ಸಂಖ್ಯೆ:ಆಇ 03 ಬಿಇಎಂ 2020, ದಿನಾಂಕ:06.07.2020 ರನ್ವಯ 2020-21ನೇ ಸಾಲಿನ ಆರ್ಥಿಕ ವರ್ಷದಲ್ಲಿ ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳು ಮತ್ತು ಬ್ಯಾಕ್ ಲಾಗ್ ಹುದ್ದೆಗಳೂ ಸೇರಿದಂತೆ ರಾಜ್ಯ ಸಿವಿಲ್ ಸೇವೆಯಲ್ಲಿನ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಸಹ ಮುಂದಿನ ಆದೇಶದವರೆಗೆ ತಡೆಹಿಡಿಯಲಾಗಿದೆ.

ರಾಜ್ಯದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ರಾಜಸ್ವ ಸಂಗ್ರಹಣೆಯಲ್ಲಿ ತೀವ್ರ ಕುಸಿತ ಉಂಟಾಗಿರುವುದರಿಂದ ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ನಿಟ್ಟಿನಲ್ಲಿ ಸಂಪನ್ಮೂಲವನ್ನು ಕ್ರೋಢೀಕರಿಸುವುದು ಅಗತ್ಯವಾಗಿರುತ್ತದೆ. ಇದಕ್ಕಾಗಿ ಸರ್ಕಾರದ ವೆಚ್ಚದ ಬಾಬ್ತಿನಲ್ಲಿ ಮಿತವ್ಯಯ ಪಾಲಿಸುವ ಅವಶ್ಯಕತೆ ಇರುವುದರಿಂದ ಆರ್ಥಿಕ ಮಿತವ್ಯಯದ ಆದೇಶವನ್ನು ತಕ್ಷಣ ಹಿಂಪಡೆಯುವುದು ಕಷ್ಟಸಾಧ್ಯವಾಗಿರುತ್ತದೆ. ಮುಂದಿನ ದಿನಗಳಲ್ಲಿ ಆರ್ಥಿಕ ಸಂಪನ್ಮೂಲವನ್ನು ಆಧರಿಸಿ ಈ ಆದೇಶವನ್ನು ಹಂತ ಹಂತವಾಗಿ ಹಿಂಪಡೆಯುವ ಬಗ್ಗೆ ಪರಿಶೀಲಿಸಲಾಗುವುದು.

ಸಂಖ್ಯೆ:ಆಇ 12 ವೆಚ್ಚ-8/2021

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ